ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಅಲ್ಪಸಂಖ್ಯಾತರ ಇಲಾಖೆಯ ವಿವಿಧ ಯೋಜನೆಗಳ ಬಗ್ಗೆ

ಶ್ರೀ ಬಿ. ಕೆ. ಹರಿಪ್ರಸಾದ್(ವಿಧಾನಸಭೆಯಿಂದ ಚುನಾಯಿತರಾದವರು) -

16 (46) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) 2020-2021 ನೇ ಸಾಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಗಳು ಯಾವುವು; ಈ ಯೋಜನೆಗಳಿಗೆ ನಿಗಧಿಪಡಿಸಿರುವ ಅನುದಾನವೆಷ್ಟು;

(ಆ) ಬಿಡುಗಡೆಯಾದ ಅನುದಾನವೆಷ್ಟು; ಖರ್ಚು ಮಾಡಿರುವ ಅನುದಾನವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಅಲ್ಪಸಂಖ್ಯಾತರ ಇಲಾಖೆಯ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲು ಸರ್ಕಾರವು ಯಾವ ಯಾವ ಅರೆ ಸರ್ಕಾರಿ ಸಂಸ್ಥೆಗಳನ್ನು ನಿಯೋಜಿಸಿದೆ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲು ಇದುವರೆವಿಗೂ ಸರ್ಕಾರ/ಇಲಾಖೆಯಿಂದ ಬಿಡುಗಡೆ ಮಾಡಿರುವ ಅನುದಾನವೆಷ್ಟು; (ಇಲಾಖಾವಾರು ಮಾಹಿತಿ ನೀಡುವುದು)

(ಈ) ಖರ್ಚು ಮಾಡಿರುವ ಅನುದಾನವೆಷ್ಟು; ಸದರಿ ಸಂಸ್ಥೆಗಳಲ್ಲಿ ಖರ್ಚಾಗದೇ ಉಳಿದಿರುವ ಅನುದಾನವೆಷ್ಟು? (ಮಾಹಿತಿ ನೀಡುವುದು)